Fax: 08282-256262
E-mail:kuvempuacademic@gmail.com

Phone No - 08282-256149
Website:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO world Rankings

ಸಂಖ್ಯೆ:ಕುವಿ:ಎಸಿ-5: 846 :2020-21 ದಿನಾಂಕ:17-07-2020

## ಸುತ್ತೋಲೆ

ವಿಷಯ: ವಿಶ್ವವಿದ್ಯಾಲಯದ ಪ್ರಥಮ ವರ್ಷದ ವಿವಿಧ ಸ್ನಾತಕ ಪದವಿಗಳ ಪ್ರವೇಶಾತಿ ಕುರಿತು.

ಉಲ್ಲೇಖ:
1. ಅಧಿಸೂಚನೆ ಸಂಖ್ಯೆ:ಕುವಿ:ಎಸಿ-1:ಬಿ.ಸಿ.ಎ.(9)/2407/2005-06, ದಿನಾಂಕ:01-08-2005.
2. ಸುತ್ತೋಲೆ ಸಂಖ್ಯೆ:ಕುವಿ:ಎಸಿ-1/2516/2010-11, ದಿನಾಂಕ:04-08-2010.
3. ಅಧಿಸೂಚನೆ ಸಂಖ್ಯೆ:ಕುವಿ:ಶೈವಿ-1:825/2011-12, ದಿನಾಂಕ:28-07-2011.
4. ಸುತ್ತೋಲೆ ಸಂಖ್ಯೆ:ಕುವಿ:ಎಸಿ-5/572/2019-20, ದಿನಾಂಕ:03-05-2019.
5. ಸುತ್ತೋಲೆ ಸಂಖ್ಯೆ:ಕುವಿ:ಎಸಿ-5/2367/2019-20, ದಿನಾಂಕ:27-06-2019.

-*****-

ವಿಶ್ವವಿದ್ಯಾಲಯದ ಸಂಯೋಜಿತ ಹಾಗೂ ಘಟಕ ಕಾಲೇಜುಗಳಲ್ಲಿ ಪ್ರಥಮ ವರ್ಷದ ವಿವಿಧ ಸ್ನಾತಕ ಪದವಿಗಳ ಪ್ರವೇಶಕ್ಕೆ ಸಂಬಂಧಪಟ್ಟಂತೆ ಉಲ್ಲೇಖ (1) ರಿಂದ (5)ರ ವರೆಗಿನ ವಿಶ್ವವಿದ್ಯಾಲಯದ ಸುತ್ತೋಲೆ ಮತ್ತು ಆದೇಶಗಳಲ್ಲಿ ಪ್ರವೇಶ ಅರ್ಹತೆಯ ನಿಯಮಗಳನ್ನು ಈಗಾಗಲೇ ಕಾಲೇಜುಗಳಿಗೆ ಒದಗಿಸಲಾಗಿದ್ದು, ಅದರಂತೆ ಕ್ರಮಕೈಗೊಳ್ಳಲು ಈ ಮೂಲಕ ತಿಳಿಸುತ್ತಾ, 2020-21ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ವಿವಿಧ ಸ್ನಾತಕ ಪದವಿಗಳ ಪ್ರವೇಶಾತಿಯನ್ನು ದಿನಾಂಕ:20-07-2020 ರಿಂದ ಪ್ರಾರಂಭಿಸಲು ಸೂಚಿಸಲಾಗಿದೆ.

1. ಸ್ನಾತಕ ಪ್ರಥಮ ವರ್ಷದ ಪದವಿ ಪ್ರವೇಶಕ್ಕೆ ಪಿ.ಯು.ಸಿ. ಅಥವಾ 10+2 ಗೆ ಸಮಾನವಾದ ವಿದ್ಯಾರ್ಹತೆ ಹೊಂದಿರುವ ವಿದ್ಯಾರ್ಥಿಗಳ ಜೊತೆಗೆ ಎಸ್.ಎಸ್.ಎಲ್.ಸಿ. ನಂತರದ **ಎರಡು ವರ್ಷಗಳ** ಜೆ.ಓ.ಸಿ. ಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ಹಾಗೂ ಎಸ್.ಎಸ್.ಎಲ್.ಸಿ. ನಂತರ ಸರ್ಕಾರದಿಂದ ಮಾನ್ಯತೆ ಪಡೆದ **ಎರಡು ವರ್ಷಗಳ** ಐ.ಟಿ.ಐ. ನಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲು ಉಲ್ಲೇಖ (3)ರಲ್ಲಿ ಅಧಿಸೂಚನೆ ಹೊರಡಿಸಲಾಗಿದ್ದು, ಅದನ್ನು ಅನುಸರಿಸುವುದು.
2. ಸ್ನಾತಕ ಪದವಿಯ ವಿನಿಯಮದಲ್ಲಿ ಡಿಪ್ಲೋಮಾ ಕೋರ್ಸ್ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪದವಿ ತರಗತಿಗಳಿಗೆ ಪ್ರವೇಶಾತಿ ನೀಡುವ ಬಗ್ಗೆ ಉಲ್ಲೇಖ-04ರ ಸುತ್ತೋಲೆಯನ್ನು ಮಾಹಿತಿಗಳನ್ನು ಒದಗಿಸಲಾಗಿದ್ದು, ಅದರಂತೆ ಪ್ರವೇಶ ನೀಡಲು ಕ್ರಮ ಕೈಗೊಳ್ಳುವುದು.
3. ಕೋವಿಡ್-19 (ಕೊರೊನಾ ವೈರಸ್) ನಿಯಂತ್ರಿಸುವ ಪ್ರಯುಕ್ತ ವಿದ್ಯಾರ್ಥಿಗಳು / ಪೋಷಕರು ಪ್ರವೇಶಾತಿ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ಮಾಸ್ಕ್ ಮತ್ತು ಸಾನಿಟೈಸರ್ ಕಡ್ಡಾಯವಾಗಿ ಬಳಸುವ ಬಗ್ಗೆ ಅರಿವು ಮೂಡಿಸಲು ತಿಳಿಸಲಾಗಿದೆ.
4. 2019-20ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕವನ್ನು ಮುಂದುವರೆಸುವುದು.
5. 2020-21ನೇ ಶೈಕ್ಷಣಿಕ ಸಾಲಿನ ಶೈಕ್ಷಣಿಕ ವೇಳಾ ಪಟ್ಟಿಯನ್ನು ನಂತರದಲ್ಲಿ ಪರಿಚಲಿಸಲಾಗುವುದು.

ಮೇಲಿನಂತೆ ನಿಯಮಗಳನ್ವಯ ಪ್ರಾಂಶುಪಾಲರೇ ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಕ್ರಮ ಕೈಗೊಳ್ಳುವುದು.

ಮಾನ್ಯ ಕುಲಸಚಿವರ
ಅನುಮೋದನೆಯಾಗಿದೆ

(ಡಾ. ಧರಣಿ ಕುಮಾರ್ ಪಿ.)
ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451.
ಶಿವಮೊಗ್ಗ ಜಿಲ್ಲೆ.

--2